# ತುಮಕೂರು ವಿಶ್ವವಿದ್ಯಾನಿಲಯ

**ಸಂಖ್ಯೆ:ತುವಿ:ಸಿಬ್ಬಂದಿ–N-107:2023–24/4539** **ದಿನಾಂಕ:28.02.2024**

## ಸುತ್ತೋಲೆ

**ವಿಷಯ:–** ದಿನಾಂಕ: 01.04.2006ರ ಪೂರ್ವದಲ್ಲಿ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ನಂತರದಲ್ಲಿ ರಾಜ್ಯ ಸರ್ಕಾರದ ಸೇವೆಗೆ ಸೇರಿದ ನೌಕರರನ್ನು ಹಳೆಯ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಆಇ–ಪಿಇಎನ್/99/2023 ದಿನಾಂಕ:24.01.2024
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:26.02.2024

* * * *

ತುಮಕೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಯ ಗಮನಕ್ಕೆ ತರಬಯಸುವುದೇನೆಂದರೆ, ದಿನಾಂಕ:01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ ದಿನಾಂಕ:01.04.2006 ರಂದು ಅಥವಾ ಆ ದಿನಾಂಕದ ನಂತರ ಸೇವೆಗೆ ಸೇರಿದ ಕಾರಣದಿಂದಾಗಿ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಉಲ್ಲೇಖ (1)ರ ಸರ್ಕಾರದ ಆದೇಶದನ್ವಯ, ಕೆಲವು ಷರತ್ತಿಗೊಳಪಟ್ಟು ಒಂದು ಬಾರಿಗೆ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಸರ್ಕಾರವು ಆದೇಶಿಸಿದೆ.

ಈ ಹಿನ್ನಲೆಯಲ್ಲಿ ದಿನಾಂಕ:01.04.2006ರ ಪೂರ್ವದಲ್ಲಿನ ನೇಮಕಾತಿ ಅಧಿಸೂಚನೆಗಳ ಮೂಲಕ ಆಯ್ಕೆ ಹೊಂದಿ ಆ ದಿನಾಂಕದಂದು ಅಥವಾ ತದನಂತರದಲ್ಲಿ ಸರ್ಕಾರದ ಸೇವೆಗೆ ಸೇರಿದ ನೌಕರರು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಗೆ ಒಳಪಡಲು ಇಚ್ಛಿಸಿದಲ್ಲಿ ತಮ್ಮ ಅಭಿಮತವನ್ನು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ, ಸೂಕ್ತ ದಾಖಲೆಗಳೊಂದಿಗೆ ದಿನಾಂಕ:30.03.2024ರೊಳಗಾಗಿ ಈ ಕಛೇರಿಗೆ ಸಲ್ಲಿಸಲು ತಿಳಿಯಪಡಿಸಲಾಗಿದೆ.

**ಕರಡು ಮಾನ್ಯ ಕುಲಸಚಿವರಿಂದ ಅನುಮೋದಿಸಿದೆ.**

**ಆದೇಶದ ಮೇರೆಗೆ,**

28/2/24

**ಉಪಕುಲಸಚಿವರು**

ಉಪಕುಲಸಚಿವರು
(ಸಿಬ್ಬಂದಿ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು, ಖರೀದಿ ಕೋಶ, ಕಾನೂನು ಕೋಶ, ಸಾಮಾನ್ಯ & ಅಭಿವೃದ್ಧಿ ವಿಭಾಗ, ಶೈಕ್ಷಣಿಕ ವಿಭಾಗ, ಪರೀಕ್ಷಾ ವಿಭಾಗ, ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ಇಂದೇ ವಿ. ವಿ. ಜಾಲತಾಣದಲ್ಲಿ ಪ್ರಕಟಿಸುವುದು ಹಾಗೂ ಎಲ್ಲಾ ಬೋಧಕ & ಬೋಧಕೇತರ ಸಿಬ್ಬಂದಿಗಳಿಗೆ ಇ-ಮೇಲ್ ಮುಖಾಂತರ ಕಳುಹಿಸುವುದು.**
9. ಕಚೇರಿ ಪ್ರತಿ.

**ವಿ.ಸೂ.: ಮೇಲ್ಕಂಡ ಅಧಿಕಾರಿಗಳು ತಮ್ಮ ಅದೀನದಲ್ಲಿ ಬರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತಪ್ಪದೇ ತರುವುದು**